**2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 29**

**ಕರ್ನಾಟಕ ಧನವಿನಿಯೋಗ (ಸಂಖ್ಯೆ. 4) ಅಧಿನಿಯಮ, 2016**

**ಪ್ರಕರಣಗಳ ಪಟ್ಟಿ**

**ಪ್ರಕರಣಗಳು:**

1. ಸಂಕ್ಷಿಪ್ತ ಹೆಸರು.
2. **ಕರ್ನಾಟಕ ರಾಜ್ಯ ಸಂಚಿತ ನಿಧಿಯಿಂದ 2016-17**ನೇ ಹಣಕಾಸು ವರ್ಷಕ್ಕಾಗಿ **344781.57** ಲಕ್ಷ ರೂಪಾಯಿಗಳ ನೀಡಿಕೆ:
3. ಧನವಿನಿಯೋಗ

**ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ**

**2016ರ ಅಧಿನಿಯಮ ಸಂಖ್ಯೆ 29.–** 2016–17ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ರಾಜ್ಯದ ಸಂಚಿತ ನಿಧಿಯೊಳಗಿನಿಂದ ವಿನಿಯೋಗಿಸಲು ಭಾರತ ಸಂವಿಧಾನದ 205ನೇ(1)(ಎ) ಅನುಚ್ಛೇದದ ಉಪಬಂಧಗಳಿಗನುಸಾರವಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಆದುದರಿಂದ, ಈ ವಿಧೇಯಕ.

(2016ರ ವಿಧಾನಸಭೆಯ ವಿಧೇಯಕ ಸಂಖ್ಯೆ 36, ಕಡತ ಸಂಖ್ಯೆ:ಸಂವ್ಯಶಾಇ 55 ಶಾಸನ 2016)

## 2016ರ ಕರ್ನಾಟಕ ಅಧಿನಿಯಮ ಸಂಖ್ಯೆ: 29

(2016ರ ಡಿಸೆಂಬರ್ 17ನೇ ದಿನಾಂಕದಂದು ಕರ್ನಾಟಕ ರಾಜ್ಯ ಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

## ಕರ್ನಾಟಕ ಧನವಿನಿಯೋಗ (ಸಂಖ್ಯೆ. 4) ಅಧಿನಿಯಮ, 2016

(2016ರ ಡಿಸೆಂಬರ್ 16ನೇ ದಿನಾಂಕದಂದು ರಾಜ್ಯಪಾಲರಿಂದ ಅನುಮತಿಯನ್ನು ಪಡೆಯಲಾಗಿದೆ)

**2016–17**ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡಲು ಒಂದು ವಿಧೇಯಕ.

**2016–17**ನೇ ಹಣಕಾಸು ವರ್ಷದ ಸೇವೆಗಳಿಗಾಗಿ ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಆ ಪೈಕಿಯಿಂದ ಕೆಲವು ಅಧಿಕ ಮೊತ್ತಗಳ ಸಂದಾಯ ಮತ್ತು ವಿನಿಯೋಗಕ್ಕಾಗಿ ಅಧಿಕಾರ ನೀಡುವುದು ಯುಕ್ತವಾಗಿರುವುದರಿಂದ :

ಇದು ಭಾರತ ಗಣರಾಜ್ಯದ ಅರವತ್ತೇಳನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಕೆಳಕಂಡಂತೆ ಅಧಿನಿಯಮಿತವಾಗಲಿ.

**1. ಸಂಕ್ಷಿಪ್ತ ಹೆಸರು:–** ಈ ಅಧಿನಿಯಮವನ್ನು ಕರ್ನಾಟಕ ಧನವಿನಿಯೋಗ (ಸಂಖ್ಯೆ: 4) ಅಧಿನಿಯಮ, 2016 ಎಂದು ಕರೆಯತಕ್ಕದ್ದು.

**2. ಕರ್ನಾಟಕ ರಾಜ್ಯ ಸಂಚಿತ ನಿಧಿಯಿಂದ 2016–17**ನೇ ಹಣಕಾಸು ವರ್ಷಕ್ಕಾಗಿ **344781.57** ಲಕ್ಷ ರೂಪಾಯಿಗಳ ನೀಡಿಕೆ: ಅನುಸೂಚಿಯ 2ನೇ ಅಂಕಣದಲ್ಲಿ ನಿರ್ದಿಷ್ಟ ಪಡಿಸಲಾದ ಸೇವೆಗಳ ಸಂಬಂಧದಲ್ಲಿ **2016–17**ನೇ ಹಣಕಾಸು ವರ್ಷದಲ್ಲಿ ಸಂದಾಯ ಮಾಡುವಾಗ ಒದಗಿಬರುವ ಹಲವಾರು ಖರ್ಚುಗಳನ್ನು ವಹಿಸುವುದಕ್ಕಾಗಿ ಅನುಸೂಚಿಯ 5ನೇ ಅಂಕಣದಲ್ಲಿ ನಿರ್ದಿಷ್ಟಪಡಿಸಲಾಗಿರುವ **ಮೂರು ಸಾವಿರದ ನಾಲ್ಕುನೂರ ನಲವತ್ತೇಳು ಕೋಟಿ ಎಂಬತ್ತೊಂದು ಲಕ್ಷ ಐವತ್ತೇಳು ಸಾವಿರ ರೂಪಾಯಿಗಳು** ಮೀರದಷ್ಟು ಕರ್ನಾಟಕ ರಾಜ್ಯ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡತಕ್ಕದ್ದು ಮತ್ತು ಉಪಯೋಗಿಸತಕ್ಕದ್ದು.

**3. ಧನವಿನಿಯೋಗ:** ಈ ಅಧಿನಿಯಮದ ಮೂಲಕ, ಕರ್ನಾಟಕ ರಾಜ್ಯದ ಸಂಚಿತ ನಿಧಿಯಿಂದ ಮತ್ತು ಅದರೊಳಗಿಂದ ಸಂದಾಯ ಮಾಡಲು ಮತ್ತು ಉಪಯೋಗಿಸಲು ಅಧಿಕಾರ ನೀಡಲಾದ ಮೊತ್ತಗಳನ್ನು ಸದರಿ ವರ್ಷಕ್ಕೆ ಸಂಬಂಧಪಟ್ಟಂತೆ ಅನುಸೂಚಿಯಲ್ಲಿ ತಿಳಿಸಲಾದ ಸೇವೆಗಳು ಮತ್ತು ಉದ್ದೇಶಗಳಿಗಾಗಿ ವಿನಿಯೋಗಿಸತಕ್ಕದ್ದು.

# ಅನುಸೂಚಿ

## (2 ಮತ್ತು 3ನೇ ಪ್ರಕರಣಗಳನ್ನು ನೋಡಿ)

(ಲಕ್ಷ ` ಗಳಲ್ಲಿ)

| | | | ಮೀರದ ಮೊಬಲಗು | | |
|---|---|---|---|---|---|
| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ವಿಧಾನಸಭೆಯಿಂದ ಪುರಸ್ಕೃತವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | ಒಟ್ಟು |
| 1 | 2 | | 3 | 4 | 5 |
| 01 | ಕೃಷಿ ಮತ್ತು ತೋಟಗಾರಿಕೆ | ರಾಜಸ್ವ | 38,363.96 | ... | 38,363.96 |
| 02 | ಪಶುಸಂಗೋಪನೆ ಮತ್ತು ಮೀನುಗಾರಿಕೆ | ರಾಜಸ್ವ | 6,256.44 | ... | 6,256.44 |
| 03 | ಆರ್ಥಿಕ | ರಾಜಸ್ವ | 1,086.00 | ... | 1,086.00 |
| 04 | ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ | ರಾಜಸ್ವ | 877.57 | 144.75 | 1,022.32 |
| 05 | ಒಳಾಡಳಿತ ಮತ್ತು ಸಾರಿಗೆ | ರಾಜಸ್ವ | 10,608.37 | ... | 10,608.37 |
| | | ಬಂಡವಾಳ | 463.40 | ... | 463.40 |
| 07 | ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತಿ ರಾಜ್ | ರಾಜಸ್ವ | 14,978.54 | ... | 14,978.54 |
| 08 | ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ | ರಾಜಸ್ವ | 2,882.81 | ... | 2,882.81 |
| | | ಬಂಡವಾಳ | 2,522.87 | ... | 2,522.87 |
| 09 | ಸಹಕಾರ | ರಾಜಸ್ವ | 6,496.00 | ... | 6,496.00 |
| | | ಬಂಡವಾಳ | 25,719.00 | ... | 25,719.00 |
| 10 | ಸಮಾಜ ಕಲ್ಯಾಣ | ರಾಜಸ್ವ | 10,625.71 | ... | 10,625.71 |
| | | ಬಂಡವಾಳ | 1,622.00 | ... | 1,622.00 |
| 11 | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ | ರಾಜಸ್ವ | 1,156.00 | ... | 1,156.00 |
| | | ಬಂಡವಾಳ | 2,800.00 | ... | 2,800.00 |
| 12 | ವಾರ್ತಾ, ಪ್ರವಾಸೋದ್ಯಮ ಮತ್ತು ಯುವಜನ ಸೇವೆಗಳು | ರಾಜಸ್ವ | ... | ... | ... |
| 13 | ಆಹಾರ ಮತ್ತು ನಾಗರಿಕ ಸರಬರಾಜು | ರಾಜಸ್ವ | 1,709.59 | ... | 1,709.59 |
| 14 | ಕಂದಾಯ | ರಾಜಸ್ವ | 4,171.28 | ... | 4,171.28 |
| 16 | ವಸತಿ | ರಾಜಸ್ವ | 7,500.00 | ... | 7,500.00 |
| 17 | ಶಿಕ್ಷಣ | ರಾಜಸ್ವ | 1,597.44 | ... | 1,597.44 |
| | | ಬಂಡವಾಳ | 19,378.00 | ... | 19,378.00 |

# ಅನುಸೂಚಿ

## (2 ಮತ್ತು 3ನೇ ಪ್ರಕರಣಗಳನ್ನು ನೋಡಿ)

(ಲಕ್ಷ ` ಗಳಲ್ಲಿ)

| | | | ಮೀರದ ಮೊಬಲಗು | | |
|---|---|---|---|---|---|
| ಬೇಡಿಕೆ ಸಂಖ್ಯೆ | ಸೇವೆಗಳು ಮತ್ತು ಉದ್ದೇಶಗಳು | | ವಿಧಾನಸಭೆಯಿಂದ ಪುರಸ್ಕೃತವಾದುದನ್ನು | ಸಂಚಿತ ನಿಧಿಯಿಂದ ಪ್ರಭೃತವಾದುದನ್ನು | ಒಟ್ಟು |
| 1 | 2 | | 3 | 4 | 5 |
| 18 | ವಾಣಿಜ್ಯ ಮತ್ತು ಕೈಗಾರಿಕೆ | ರಾಜಸ್ವ | 9,051.88 | ... | 9,051.88 |
| | | ಬಂಡವಾಳ | 2,169.05 | ... | 2,169.05 |
| 19 | ನಗರಾಭಿವೃದ್ಧಿ | ರಾಜಸ್ವ | 47,770.12 | ... | 47,770.12 |
| 20 | ಲೋಕೋಪಯೋಗಿ | ರಾಜಸ್ವ | 5,185.00 | ... | 5,185.00 |
| | | ಬಂಡವಾಳ | 84,840.00 | ... | 84,840.00 |
| 21 | ಜಲಸಂಪನ್ಮೂಲ | ರಾಜಸ್ವ | ... | ... | ... |
| | | ಬಂಡವಾಳ | 701.00 | ... | 701.00 |
| 22 | ಆರೋಗ್ಯ ಮತ್ತು ಕುಟುಂಬ ಕಲ್ಯಾಣ | ರಾಜಸ್ವ | 26,095.80 | ... | 26,095.80 |
| | | ಬಂಡವಾಳ | 4,187.00 | ... | 4,187.00 |
| 23 | ಕಾರ್ಮಿಕ | ರಾಜಸ್ವ | 2.09 | ... | 2.09 |
| 24 | ಇಂಧನ | ರಾಜಸ್ವ | 881.09 | ... | 881.09 |
| 25 | ಕನ್ನಡ ಮತ್ತು ಸಂಸ್ಕೃತಿ | ರಾಜಸ್ವ | 400.00 | ... | 400.00 |
| 26 | ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ | ರಾಜಸ್ವ | ... | ... | ... |
| 27 | ಕಾನೂನು | ರಾಜಸ್ವ | 1,475.39 | ... | 1,475.39 |
| 28 | ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ | ರಾಜಸ್ವ | 1,063.42 | ... | 1,063.42 |
| | **ಮೊತ್ತ** | ರಾಜಸ್ವ | **2,00,234.50** | **144.75** | **2,00,379.25** |
| | | ಬಂಡವಾಳ | **1,44,402.32** | ... | **1,44,402.32** |
| | **ಒಟ್ಟು ಮೊತ್ತ** | | **3,44,636.82** | **144.75** | **3,44,781.57** |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು ಅವರ ಹೆಸರಿನಲ್ಲಿ,

**ಕೆ. ದ್ವಾರಕನಾಥ್ ಬಾಬು**
ಸರ್ಕಾರದ ಕಾರ್ಯದರ್ಶಿ
ಸಂಸದೀಯ ವ್ಯವಹಾರಗಳ ಇಲಾಖೆ